ಅ) ಸಾಗರ ವಿಧಾನ ಸಭಾ ವ್ಯಾಪ್ತಿಯ ಹೊಸೂರು ಗೌತಮಪುರದ ಸಾಕಷ್ಟು ರೈತರ ಜಮೀನು ಡ್ಯಾಂನಿಂದ ಮುಳುಗಡೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈವರೆಗೂ ಪರಿಹಾರದ ಹಣ ಬಿಡುಗಡೆಯಾಗದಿರಲು ಕಾರಣವೇನು;

ಇ) ಸದರಿ ಭೂಮಿಯಲ್ಲಿ ಬೆಳೆ ಬೆಳೆದರೆ ಭಾರಿ ನೀರಾವರಿ ಇಲಾಖೆಯವರು ರೈತರನ್ನು ಬಂಧಿಸುತ್ತಿರುವುದಲ್ಲದೆ ಕಿರುಕುಳ ನೀಡುತ್ತಿರುವುದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; (ವಿವರ ಒದಗಿಸುವುದು)?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು) :

ಅ) ಬಂದಿದೆ.

ಆ) ಭೂಸ್ವಾಧೀನದ ಸಂಬಂಧ ಭಾಗಶಃ ವೊತ್ತವನ್ನು ಕಂದಾಯ ಇಲಾಖೆಗೆ ಠೇವಣಿಮಾಡಲಾಗಿದೆ. ಪೂರ್ಣ ವೊತ್ತವನ್ನು ಭರಿಸದ ಕಾರಣ ಭೂ ಪರಿಹಾರ ಬಿಡುಗಡೆಯಾಗಿರುವುದಿಲ್ಲ.

ಇ) ಸ್ವಾಧೀನ ಪಡಿಸಿಕೊಂಡ ಭೂಮಿಯಲ್ಲಿ ಬೆಳೆ ಬೆಳೆದವರನ್ನು ಬಂಧಿಸುತ್ತಿರುವ ಹಾಗೂ ಕಿರುಕುಳ ನೀಡುತ್ತಿರುವ ಬಗ್ಗೆ ದೂರುಗಳು ಸರ್ಕರದ ಗಮನಕ್ಕೆ ಬಂದಿರುವುದಿಲ್ಲ.

5368(6198) ಶ್ರೀ ಗೋವಿಂದ್ ಎಂ. ಕಾರಜೋಳ್ (ಮುಧೋಳ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಸ್ವಾತಂತ್ರ್ಯ ಹೋರಾಟದಲ್ಲಿ ಬ್ರಟಿಷರ ವಿರುದ್ಧ ಹೋರಾಡಿ ಪ್ರಾಣಾರ್ಪಣೆ ಮಾಡಿದ ಅಂದಿನ ಕಿತ್ತೂರ ಸಂಸ್ಥಾನದ ರಾಣಿ ಚೆನ್ನಮ್ಮನವರ ವಂಶಸ್ಥರಾದ ಶ್ರೀ ತಾತಾ ಸಾಹೇಬ ಬಿ. ದೇಸಾಯಿ, ಕಿತ್ತೂರ, ಬೆಳಗಾಂವ ಜಿಲ್ಲೆ ಇವರಿಗೆ ಪರಿಹಾರ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಪರಿಹಾರ ನೀಡದೆ ಇರಲು ಕಾರಣವೇನು;

ಇ) ಎಷ್ಟು ದಿನಗಳಲ್ಲಿ ಪರಿಹಾರ ನೀಡಲಾಗುವುದು?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು) :

ಅ) ಹೌದು

ಆ) ಸರ್ಕಾರವು ಈಗಾಗಲೇ ರಾಣಿ ಚೆನ್ನಮ್ಮನವರ ವಂಶಸ್ಥರಿಗೆ ಕಡಿಮೆ ಬೆಲೆಯಲ್ಲಿ ಜಮೀನು ಮತ್ತು ರಾಜ್ಯ ಗೌರವಧನವನ್ನು ಮಂಜೂರು ಮಾಡಲಾಗಿದೆ.

ಇ) 'ಆ' ಪ್ರಶ್ನೆಗೆ ನೀಡಿರುವ ಉತ್ತರದಿಂದಾಗಿ ಈ ಪ್ರಶ್ನೆ ಉದ್ಭವಿಸುವುದಿಲ್ಲ.

5369(6199) ಶ್ರೀ ಗೋವಿಂದ ಎಂ. ಕಾರಜೋಳ್, (ಮುಧೋಳ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬ್ಯಾಟರಾಯನಪುರ ನಗರಸಭೆಯ ವಾರ್ಡ್ ನಂ.16 ದಿನಾಂಕ 16-10-1996 ರಂದು 171 ಅಕ್ರಮವಾಗಿ ಕಟ್ಟಿಸಿದ ಮನೆಗಳನ್ನು ಸಕ್ರಮಗೊಳಿಸಲಾಗಿತ್ತು ಮತ್ತು 15 ವರ್ಷಗಳ ಕಾಲ ಪರಭಾರೆ ಮಾಡಬಾರದೆಂಬ ಷರತ್ತು ವಿಧಿಸಲಾಗಿತ್ತು, ಷರತ್ತು ಉಲ್ಲಂಘಿಸಿ ಪರಭಾರೆ ಮಾಡಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು;

ಇ) ಷರತ್ತುಗಳನ್ನು ಉಲ್ಲಂಘಿಸಿ ಖಾತಾ ಬದಲಾವಣೆ ಮಾಡಿರುವ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು) :

ಅ) ಬಂದಿದೆ

ಆ) 6 ಫಲಾನುಭವಿಗಳು ಷರತ್ತು ಉಲ್ಲಂಘಿಸಿ ಬೇರೆ ವ್ಯಕ್ತಿಗಳಿಗೆ ಮಾರಾಟ ಮಾಡಿದ್ದು ಖರೀದಿದಾರರ ಹೆಸರಿಗೆ ವರ್ಗಾವಣೆಗೊಂಡ ಖಾತೆಗಳನ್ನು ರದ್ದುಪಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಹೌದು.

5370(6200) ಶ್ರೀ ಗೋವಿಂದ ಎಂ. ಕಾರಜೋಳ (ಮುಧೋಳ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬ್ಯಾಟರಾಯನಪುರ ನಗರಸಭೆ ವಾರ್ಡ್ ನಂ. 16 ರಲ್ಲಿ 171 ಕುಟುಂಬಗಳ ಬಡವರಿಗೆ ಹಕ್ಕುಪತ್ರಗಳನ್ನು ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಎಷ್ಟು ದಿನಗಳಲ್ಲಿ ಹಕ್ಕುಪತ್ರಗಳನ್ನು ನೀಡಲಾಗುವುದು?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು) :

ಅ) ಹೌದು.

ಆ) ಈ ಕುಟುಂಬಗಳು ಅಕ್ರಮವಾಗಿ ಮನೆಗಳನ್ನು ಕಟ್ಟಿಕೊಂಡಿದ್ದು, ಸದರಿ ಮನೆಗಳನ್ನು ಸಕ್ರಮ ಗೊಳಿಸುವ ಕಾರ್ಯ ಸಕ್ಷಮ ಪ್ರಾಧಿಕಾರದ ಪರಿಶೀಲನೆಯಲ್ಲಿರುತ್ತದೆ. ಈ ಕಾರ್ಯ ಪೂರ್ಣಗೊಂಡ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು.

5371(6047) ಶ್ರೀ ಹಾಲಪ್ಪ ಹೆಚ್. (ಹೊಸನಗರ) : ಮಾನ್ಯ ಜಲ ಸಂಪನ್ಮೂಲ ಹಾಗೂ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ತುಂಗಾ ಮೇಲ್ದಂಡೆ ಯೋಜನೆ ಮುಖ್ಯ ಕಾಲುವೆಯು ಶಿವಮೊಗ್ಗ ತಾಲ್ಲೂಕಿನಲ್ಲಿ ಹಾದು ಹೋಗುತ್ತಿಲಿದ್ದು, ಈ ನಾಲಾದಿಂದ ಅಕ್ಕಪಕ್ಕದ ಗ್ರಾಮಗಳಿಗೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸುವ ಯೋಜನೆ ಸರ್ಕಾರಕ್ಕೆ ಇದೆಯೇ?

ಆ) ನಾಲಾ ಅಕ್ಕಪಕ್ಕ ಇರುವ ಗ್ರಾಮಗಳಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರಿನ ತೀವ್ರ ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಈ ನಾಲಾದಿಂದ ಕುಡಿಯುವ ನೀರಿನ ಶಾಶ್ವತ ಸೌಲಭ್ಯ ಕಲ್ಪಿಸಲು ಇರುವ ತೊಂದರೆ ಏನು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲ ಸಂಪನ್ಮೂಲ ಹಾಗೂ ಸಾರಿಗೆ ಸಚಿವರು) :

ಅ) ತುಂಗಾ ಮೇಲ್ದಂಡೆ ಯೋಜನೆಯ ಮುಖ್ಯ ಕಾಲುವೆಯಿಂದ ನಾಲಾ ಅಕ್ಕಪಕ್ಕದ ಗ್ರಾಮಕ್ಕೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸುವುದು ಯೋಜನೆಯಲ್ಲಿ ಸೇರಿರುವುದಿಲ್ಲ.

ಆ) ಇಲ್ಲ.

ಇ) ತುಂಗಾ ಮೇಲ್ದಂಡೆ ಯೋಜನೆಯಡಿ 80,494 ಹೆಕ್ಟೇರ್ ಅಚ್ಚುಕಟ್ಟಿನ ಬೆಳೆಗಳಿಗೆ ಖಾರೀಫ್ ಋತುವಿನಲ್ಲಿ ಮಾತ್ರ ನೀರೊದಗಿಸುವುದಕ್ಕೆ ಯೋಜನೆಯನ್ನು ರೂಪಿಸಿದ್ದು, ಕುಡಿಯುವ ನೀರಿನ ಸೌಲಭ್ಯ ಕಲ್ಪಿಸುವುದು ಯೋಜನೆಯಲ್ಲಿ ಸೇರಿರುವುದಿಲ್ಲ.

5372(5420) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?